ಓ.ಎಸ್. ನಂ.35/2024
ಪಿಡಬ್ಲು-1

ದಿನಾಂಕ 22.11.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.

ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದ

ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ. ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ತಯಾರಿಸಲು ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳನ್ನು ವಕೀಲರು ನನಗೆ ಗೊತ್ತಿರುವ ಭಾಷೆಯಲ್ಲಿ ಓದಿ ಹೇಳಿರುತ್ತಾರೆ.

ಮಾರಾಟ ಪತ್ರದ ದೃಡೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

ಯಾಳವಾರ ಗ್ರಾಮದ ಸರ್ವೆ ನಂ.140 ಕ್ಕೆ ಸಂಬಂಧಸಿದ 04 ಕೈಬರಹದ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-2 ರಿಂದ 5 ಎಂದು ಗುರುತಿಸಲಾಯಿತು.

ಯಾಳವಾರ ಗ್ರಾಮದ ಸರ್ವೆ ನಂ.140 ಕ್ಕೆ ಸಂಬಂಧಸಿದ 13 ಕೈಬರಹದ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-6 ಮತ್ತು 18 ಎಂದು ಗುರುತಿಸಲಾಯಿತು.

MR No.H-33/2017-18 ರ ಮುಟೇಷನ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-19 ಎಂದು ಗುರುತಿಸಲಾಯಿತು.

ತಹಸೀಲ್ದಾರರಿಗೆ ನೀಡಿದ ಅರ್ಜಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-20 ಎಂದು ಗುರುತಿಸಲಾಯಿತು.

ಅಸಲು ದಾವೆ ನಂ.119/2022 ಆದೇಶ ಪುಟಗಳನ್ನು ಹಾಜರುಪಡಿಸಿದ್ದು ಅದನ್ನು ನಿಪಿ-21 ಎಂದು ಗುರುತಿಸಲಾಯಿತು.

ಪಾಟಿ ಸವಾಲುಃ ಪ್ರತಿವಾದಿ ಪರ ವಕೀಲರ ಕೋರಿಕೆಯ ಮೇರೆಗೆ ಪಾಟಿ ಸವಾಲು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ.ಸರಿ ಇದೆ

ಸಿವಿಲ್ ನ್ಯಾಯಾಧೀಶರು
ಜೇವರ್ಗಿ